## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೈಸೂರು, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಯಲ್ಲಿರುವ ಬೆಟ್ಟಕುರುಬ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ ಮಾಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಪತ್ರ ಸಂಖ್ಯೆ:ಟಿಆರ್ಐ/ಮೈ/ ಸಿಆರ್-06/2012-13 ದಿ: 24-8-2013.

**ಪ್ರಸ್ತಾವನೆ:**

ಸ್ವಾಮಿ ವಿವೇಕಾನಂದ ಯೂತ್ ಮೂಮೆಂಟ್, ಮತ್ತಿತರ ಸಂಘ ಸಂಸ್ಥೆಗಳು ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಿ ಮೈಸೂರು, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಯಲ್ಲಿರುವ ಬೆಟ್ಟ ಕುರುಬ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರು ಕರ್ನಾಟಕ ರಾಜ್ಯದಲ್ಲಿ ನೆಲೆಸಿರುವ ಮೈಸೂರು, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಯಲ್ಲಿರುವ ಬೆಟ್ಟಕುರುಬ ಸಮುದಾಯದ ಬಗ್ಗೆ 12 ತಿಂಗಳ ಕಾಲಾವಕಾಶದಲ್ಲಿ ರೂ.6.19 ಲಕ್ಷಗಳ (ಆರು ಲಕ್ಷ ಹತ್ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ) ವೆಚ್ಚದಲ್ಲಿ ಕುಲಶಾಸ್ತ್ರೀಯ ಅಧ್ಯಯನ ಕೈಗೊಳ್ಳಲು ಸರ್ಕಾರದ ಅನುಮತಿ ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 209 ಎಸ್ಎಡಿ 2012 ಬೆಂಗಳೂರು, ದಿನಾಂಕ: 23-11-2013**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮೈಸೂರು, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಯಲ್ಲಿರುವ ಬೆಟ್ಟ ಕುರುಬ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತು ಇವರ ಆಚಾರ, ವಿಚಾರ, ಭಾಷೆ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸ್ಥಿತಿಗತಿ, ಭೌಗೋಳಿಕ ಅಂಶಗಳ ಕುರಿತಂತೆ ಈ ಕೆಳಕಂಡ 5 ಅಂಶಗಳನ್ನು ಪರಿಗಣಿಸಿ, ಕುಲಶಾಸ್ತ್ರೀಯ ಅಧ್ಯಯನವನ್ನು ರೂ.6.19 ಲಕ್ಷಗಳ (ಆರು ಲಕ್ಷ ಹತ್ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ) ವೆಚ್ಚದಲ್ಲಿ ಕೈಗೊಳ್ಳಲು ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿದೆ.

1) ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ ಈ ಕೆಳಕಂಡ ಐದು ವಿಷಯಗಳನ್ನು ಪರಿಗಣಿಸುವುದು.

    1. Indication of Primitive traits
    2. Distinctive Culture,
    3. Geographical Isolation
    4. Shyness of contact with the community at large
    5. Backwardness

2) ಕುಲಶಾಸ್ತ್ರೀಯ ಅಧ್ಯಯನ ಅಂದಾಜು ವೆಚ್ಚವಾದ ರೂ.6.19 ಲಕ್ಷಗಳನ್ನು ಹೊರತುಪಡಿಸಿ ಸಂಸ್ಥೆಯ ಯಾವುದೇ ವೆಚ್ಚಗಳನ್ನು ಸಮಾಜ ಕಲ್ಯಾಣ ಇಲಾಖೆ ಭರಿಸುವುದಿಲ್ಲ
3) ಸದರಿ ಅಧ್ಯಯನದಲ್ಲಿ ಬೆಟ್ಟ ಕುರುಬ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಬಹುದೇ ಎಂಬ ಕುರಿತಂತೆ ವರದಿಯಲ್ಲಿ ಸ್ಪಷ್ಟ ಅಭಿಪ್ರಾಯ ನಮೂದಿಸತಕ್ಕದ್ದು.
5) ಅಂತಹ ಅಧ್ಯಯನವನ್ನು 12ತಿಂಗಳಲ್ಲಿ ಪೂರ್ಣಗೊಳಿಸಿ ವರದಿ ಸಲ್ಲಿಸತಕ್ಕದ್ದು.
6) ಅಧ್ಯಯನ ವರದಿಯನ್ನು ಕನ್ನಡ ಭಾಷೆ ಹಾಗೂ ಆಂಗ್ಲ ಭಾಷೆಯಲ್ಲಿ ತಯಾರಿಸಿ ತಲಾ ಐದು ಪ್ರತಿಗಳಲ್ಲಿ ಒದಗಿಸತಕ್ಕದ್ದು.

ಆ ಸಂಬಂಧದ ವೆಚ್ಚವನ್ನು ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಗೆ ಕುಲಶಾಸ್ತ್ರೀಯ ಅಧ್ಯಯನ ನಡೆಸಲು ಗಿರಿಜನ ಉಪಯೋಜನೆಯಡಿ ಕ್ರೋಢೀಕೃತ ಲೆಕ್ಕಶೀರ್ಷಿಕೆ: 2225-02-283-0-02(ಯೋಜನೆ)ರ ಅಡಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 01 ಟಿಎಫ್‌ಪಿ 2013, ದಿ:10.05.2013ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲ

(ಎನ್. ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2(ಪ್ರ)
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1) ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು.
4) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕೃಷಿ ಭವನ, ಬೆಂಗಳೂರು.
5) ಶಾಖಾ ರಕ್ಷ ಕಡತ.
6) ಹೆಚ್ಚುವರಿ ಪ್ರತಿ-03.